ಪಂಚಾಯತಿ ಹಣದಲ್ಲಿ 10 ಸಾವಿರ ರೂಪಾಯಿಗಳನ್ನು ಮಂಜೂರು ಮಾಡಲಾಗಿದೆ. 1998-99ರಲ್ಲಿ ಕುಸ್ತಿ ಅಖಾಡ ದುರಸ್ತಿಗಾಗಿಯೇ 50 ಸಾವಿರ ರೂಪಾಯಿಗಳನ್ನು ಮಂಜೂರು ಮಾಡಲಾಗಿದೆ.

ಬೆಳಗಾಂ ಜಿಲ್ಲೆ ಹುಕ್ಕೇರಿ ತಾಲ್ಲೂಕಿನಲ್ಲಿ ಕ್ರೀಡಾಂಗಣ ಕಾಮಗಾರಿಯನ್ನು ಪ್ರಾರಂಭಿಸುವುದು

128 (1561) ಶ್ರೀ ಉಮೇಶ್ ವಿಶ್ವನಾಥ ಕತ್ತಿ (ಹುಕ್ಕೇರಿ) : ಮಾನ್ಯ ಯುವಜನ ಮತ್ತು ಕ್ರೀಡಾ ಹಾಗೂ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಹುಕ್ಕೇರಿ ತಾಲ್ಲೂಕಿನ ಕ್ರೀಡಾಂಗಣ ಕಳೆದ ಸಾಲಿನಲ್ಲಿ ಮಂಜೂರಾತಿಯಾಗಿದ್ದು ಇನ್ನು ಕಾಮಗಾರಿಯನ್ನು ಪ್ರಾರಂಭಿಸಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಇ) ಸದರಿ ಕಾಮಗಾರಿಗೆ ಬಿಡುಗಡೆ ಮಾಡುವ ಅನುದಾನವೆಷ್ಟು? ಹಾಗೂ ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್(ಯುವಜನಸೇವಾ ಮತ್ತು ಕ್ರೀಡಾ ರಾಜ್ಯಸಚಿವರು) :

ಅ) ಹುಕ್ಕೇರಿ ತಾಲ್ಲೂಕು ಕ್ರೀಡಾಂಗಣವನ್ನು ಸಂಕೇಶ್ವರದಲ್ಲಿ ರೂ.45.80ಲಕ್ಷದ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದ್ದು ಇದಕ್ಕೆ ಜಿಲ್ಲಾ ಪಂಚಾಯತ್ ವತಿಯಿಂದ ಮತ್ತು ಸಾರ್ವಜನಿಕ ವಂತಿಕೆಯಿಂದ ಬಂದ ಹಣದಿಂದ ರೂ. 16.44 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

ಆ) ಉದ್ಭವಿಸುವುದಿಲ್ಲ.

ಇ) ಈ ಕಾಮಗಾರಿಗೆ ಜಿಲ್ಲಾಪಂಚಾಯತ್‌ನಿಂದ ಇನ್ನೂ ಹೆಚ್ಚಿನ ಅನುದಾನವನ್ನು ನಿರೀಕ್ಷಿಸಲಾಗಿದೆಯಲ್ಲದೆ ಕೇಂದ್ರ ಸರ್ಕಾರವು 6.81 ಲಕ್ಷಗಳ ಬಿಡುಗಡೆಗೆ ತಾತ್ವಿಕ ಒಪ್ಪಿಗೆ ನೀಡಿದ್ದು ರೂ.4.85 ಲಕ್ಷಗಳನ್ನು ಬಿಡುಗಡೆ ಮಾಡಿ ಇನ್ನುಳಿದ ಹಣವನ್ನು ಸಾರ್ವಜನಿಕ ವಂತಿಕೆಯಿಂದ ಪಡೆದು ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.

ಶ್ರೀ ಉಮೇಶ್ ವಿಶ್ವನಾಥ್ ಕತ್ತಿ : ಮಾನ್ಯ ಅಧ್ಯಕ್ಷರೆ, ನಾನು ಬೆಳಗಾಂ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನಲ್ಲಿ ಕ್ರೀಡಾಂಗಣವನ್ನು ಯಾವಾಗ ಪ್ರಾರಂಭ ಮಾಡುತ್ತೀರಿ ಎಂದು ಪ್ರಶ್ನೆ ಕೇಳಿದರೆ ಮಾನ್ಯ ಮಂತ್ರಿಗಳು ಉತ್ತರದಲ್ಲಿ ಸಂಕೇಶ್ವರದಲ್ಲಿ ಕ್ರೀಡಾಂಗಣ ನಿರ್ಮಿಸಲಾಗುತ್ತಿದೆಯೆಂದು ಹೇಳಿದ್ದಾರೆ. ನನ್ನ ಪ್ರಶ್ನೆಗೆ ಉತ್ತರ ಸಂಬಂಧವೇ ಇಲ್ಲದಂತೆ ಇದೆ.

ಶ್ರೀ ಎಸ್. ಎಸ್. ಮಲ್ಲಿಕಾರ್ಜುನ (ಯುವಜನ ಸೇವೆ ಮತ್ತು ಕ್ರೀಡಾ ರಾಜ್ಯಸಚಿವರು) : ಮಾನ್ಯ ಅಧ್ಯಕ್ಷರೆ, ಒಂದು ತಾಲ್ಲೂಕಿಗೆ ಒಂದು ಕ್ರೀಡಾಂಗಣವನ್ನು ಮಾತ್ರ ಮಂಜೂರು ಮಾಡುವುದರಿಂದ ಆ ಕ್ರೀಡಾಂಗಣ ಹುಕ್ಕೇರಿ ತಾಲ್ಲೂಕಿನಲ್ಲಿ ಬರುವ ಸಂಕೇಶ್ವರದಲ್ಲಿ ನಿರ್ಮಿಸಲಾಗುತ್ತಿದೆ, ಕೆಲಸ ಕೂಡ ಈಗ ನಡೆಯುತ್ತಿದೆ.

ಶ್ರೀ ಉಮೇಶ್ ವಿ. ಕತ್ತಿ : ಸಂಕೇಶ್ವರದಲ್ಲಿ ಕ್ರೀಡಾಂಗಣ ಆಗಲಿ. ಆದರೆ ಹುಕ್ಕೇರಿಯಲ್ಲಿ ಕ್ರೀಡಾಂಗಣವನ್ನು ಯಾವಾಗ ಪ್ರಾರಂಭ ಮಾಡುತ್ತೀರಿ ಎಂಬ ಬಗ್ಗೆ ನಾನು ಪ್ರಶ್ನೆ ಕೇಳಿರುವುದು.

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ : ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ಏನು ಹೇಳುತ್ತಿದ್ದಾರೆ ಅದರಂತೆ ಆ ಕ್ರೀಡಾಂಗಣ ಹುಕ್ಕೇರಿಯಲ್ಲಿಯೇ ಆಗಬೇಕೆಂದು ಹಿಂದೆ ಇತ್ತು. ಆದರೆ ಅಲ್ಲಿ ಜಾಗ ಒದಗಿಸಿಕೊಡಲಿಲ್ಲವಾದ್ದರಿಂದ ಆ ಕ್ರೀಡಾಂಗಣವನ್ನು ಸಂಕೇಶ್ವರದಲ್ಲಿ ನಿರ್ಮಿಸಲು ಪ್ರಾರಂಭಿಸಲಾಯಿತು. ಈಗ ಸದಸ್ಯರು ಹುಕ್ಕೇರಿಯಲ್ಲಿಯೂ ಕ್ರೀಡಾಂಗಣವಾಗಬೇಕೆಂದು ಹೇಳಿದ್ದಾರೆ. ಅದರ ಬಗ್ಗೆ ಪರಿಶೀಲನೆ ಮಾಡಲಾಗುವುದು.

ಶ್ರೀ ಉಮೇಶ್ ವಿ. ಕತ್ತಿ : ಮಾನ್ಯ ಅಧ್ಯಕ್ಷರೆ, ಹುಕ್ಕೇರಿಯಲ್ಲಿ ಕ್ರೀಡಾಂಗಣ ನಿರ್ಮಿಸುವುದಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗಿದೆ. ಆದುದರಿಂದ ಆ ಕ್ರೀಡಾಂಗಣವನ್ನು ಹುಕ್ಕೇರಿಯಲ್ಲಿ ಯಾವಾಗ ಪ್ರಾರಂಭಿಸಲಾಗುವುದು ಎಂಬ ಬಗ್ಗೆ ಮಾನ್ಯ ಸಚಿವರು ನಿಖರವಾಗಿ ತಿಳಿಸಬೇಕು.

ಶ್ರೀ ಎಸ್. ಎಸ್. ಮಲ್ಲಿಕಾರ್ಜುನ : ಅದರ ಬಗ್ಗೆ ನಾವು ಪರಿಶೀಲನೆ ಮಾಡುತ್ತೇವೆ.

ಶ್ರೀ ಎ.ಬಿ.ಪಾಟೀಲ್ : ಮಾನ್ಯ ಅಧ್ಯಕ್ಷರೆ, ಹುಕ್ಕೇರಿ ತಾಲ್ಲೂಕು ಕ್ರೀಡಾಂಗಣವನ್ನು ಸಂಕೇಶ್ವರದಲ್ಲಿ ನಿರ್ಮಿಸಲು 45.80 ಲಕ್ಷ ರೂಪಾಯಿಗಳ ಅಂದಾಜು ಮಾಡಿ ರಾಜ್ಯ ಸರ್ಕಾರ ಕೇವಲ 16.44 ಲಕ್ಷ ರೂಪಾಯಿಗಳನ್ನು ಮಾತ್ರ ಬಿಡುಗಡೆ ಮಾಡಿದೆ. ಕೇವಲ ಇಷ್ಟು ಹಣದಲ್ಲಿ ಕ್ರೀಡಾಂಗಣವನ್ನು ಕಟ್ಟುವುದಕ್ಕೆ ಆಗುವುದಿಲ್ಲ. ಆದುದರಿಂದ ಉಳಿದ ಹಣವನ್ನು ಯಾವಾಗ ಬಿಡುಗಡೆ ಮಾಡುತ್ತಾರೆ ಎಂಬ ಬಗ್ಗೆ ಸಚಿವರು ಉತ್ತರಿಸಬೇಕು.

ಶ್ರೀ ಎಸ್. ಎಸ್. ಮಲ್ಲಿಕಾರ್ಜುನ : ಮಾನ್ಯ ಅಧ್ಯಕ್ಷರೆ, ಹುಕ್ಕೇರಿ ತಾಲ್ಲೂಕಿನ ಸಂಕೇಶ್ವರದಲ್ಲಿನ ಕ್ರೀಡಾಂಗಣ ನಿರ್ಮಾಣಕ್ಕೆ ಅಂದಾಜು 45.80ಲಕ್ಷ ರೂಪಾಯಿಗಳೆಂದು ಮಾಡಲಾಗಿದ್ದು ಈಗಾಗಲೇ 16.44ಲಕ್ಷ ರೂಪಾಯಿಗಳನ್ನು ಪೆಚ್ಚ ಮಾಡಲಾಗಿದೆ. ಈಗಾಗಲೇ ಕೇಂದ್ರ ಸರ್ಕಾರದಿಂದ 6 ಲಕ್ಷದ 81 ಸಾವಿರ ರೂಪಾಯಿಗಳಿಗೆ ಮಂಜೂರಾತಿ ಕೂಡ ದೊರೆತಿದೆ. ಅದರ ಬಾಬ್ತಿನಲ್ಲಿ 4 ಲಕ್ಷದ 86 ಸಾವಿರ ರೂಪಾಯಿಗಳು ಬರುತ್ತಿದೆ. ಅದರಲ್ಲಿಯ ಹಣವನ್ನು ಉಪಯೋಗಿಸಿಕೊಂಡು ಆದಷ್ಟು ಬೇಗ ಕೆಲಸವನ್ನು ಪ್ರಾರಂಭ ಮಾಡುತ್ತೇವೆ. ಇದಲ್ಲದೇ 2001-02ನೇ ಸಾಲಿನಲ್ಲಿ ಜಿಲ್ಲಾ ಪಂಚಾಯಿತಿ ವತಿಯಿಂದ ಕೂಡ 8 ಲಕ್ಷ ರೂಪಾಯಿಗಳನ್ನು ಅಂದಾಜಿನಲ್ಲಿ ಸೇರಿಸಿ ಕೆಲಸವನ್ನು ಪ್ರಾರಂಭ ಮಾಡಿ ಈ ವರ್ಷವೇ ಮುಗಿಸುವುದಕ್ಕೆ ನಾವು ಪ್ರಯತ್ನ ಪಡುತ್ತೇವೆ.

ಶ್ರೀ ಕೆ.ಬಿ. ಕೃಷ್ಣಮೂರ್ತಿ : ಮಾನ್ಯ ಅಧ್ಯಕ್ಷರೆ, ಸಿಂಧಗಿ ತಾಲ್ಲೂಕು ಒಂದೇ ಅಲ್ಲ. ಹಲವಾರು ತಾಲ್ಲೂಕುಗಳಲ್ಲಿ ಕ್ರೀಡಾಂಗಣ ನಿರ್ಮಾಣ 1994 ರಿಂದಲೂ ಇನ್ನೂ ಪ್ರಾರಂಭವಾಗಿಲ್ಲ. ಆದುದರಿಂದ ಮುಂದಿನ ವರ್ಷದಲ್ಲಾದರೂ ಬಜೆಟ್‌ನಲ್ಲಿ ಕ್ರೀಡಾಂಗಣ ನಿರ್ಮಾಣಕ್ಕೆ ಹಣವಿಟ್ಟು ಕ್ರೀಡಾಂಗಣವನ್ನು ಕಟ್ಟದಿದ್ದರೆ ಇವರು ಕ್ರೀಡಾಪಟುಗಳಿಗೆ ಯಾವ ರೀತಿಯಲ್ಲಿ ಪ್ರೋತ್ಸಹ ಕೊಟ್ಟಂತಾಗುತ್ತದೆ ಎಂಬ ಬಗ್ಗೆ ಹೇಳಬೇಕು.

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ: ಇದಕ್ಕೆ ಸಂಬಂಧಪಟ್ಟಂತೆ ಬೇರೆ ಪ್ರಶ್ನೆಯನ್ನು ಮಾನ್ಯ ಸದಸ್ಯರು ಕಳುಹಿಸಿಕೊಟ್ಟರೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರವಾದ ಉತ್ತರವನ್ನು ಒದಗಿಸಿಕೊಡುತ್ತೇನೆ.

(ಅ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು:

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಸಚಿವರು): ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳ 9ನೇ ಪಟ್ಟಿಯಲ್ಲಿರುವ 155 ಪ್ರಶ್ನೆಗಳ ಪೈಕಿ 120ಕ್ಕೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದಿಡುತ್ತೇನೆ.

ರಾಜ್ಯದಲ್ಲಿನ ಪಶುವೈದ್ಯಕೀಯ ಕೇಂದ್ರಗಳಲ್ಲಿ ವೈದ್ಯರ ಮತ್ತು ಔಷಧಿಗಳ ಕೊರತೆ

997(1209) ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ) : ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿನ ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ವೈದ್ಯರ ಹಾಗೂ ಔಷಧಿಗಳ ಕೊರತೆ ಇರುವುದನ್ನು ಸರ್ಕಾರ ಮನಗಂಡಿದೆಯೇ?

2) ಹಾಗಿದ್ದಲ್ಲಿ ಈ ಕೊರತೆಯನ್ನು ನಿವಾರಿಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

ಶ್ರೀ ಎ.ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

1) ಹೌದು

2) ಮುಂದಿನ ವರ್ಷದಲ್ಲಿ ಔಷಧಿಗಳ ಹೆಚ್ಚಿನ ವಂಟನಕ್ಕೆ ಕ್ರಮ ಕೈಗೊಳ್ಳಲಾಗುವುದು ಮತ್ತು ಖಾಲಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತುಂಬಲು ಜಿಲ್ಲಾಧಿಕಾರಿಗಳಿಂದ ಕ್ರಮವನ್ನು ಕೈಗೊಂಡಿದೆ, ಪ್ರಕ್ರಿಯೆ ಪ್ರಾರಂಭಗೊಂಡಿದೆ.

ರಾಜ್ಯದ ಹೆದ್ದಾರಿಗಳ ಅಭಿವೃದ್ಧಿ

998 (1210) ಶ್ರೀ ಎಂ.ಎಸ್.ಆತ್ಮಾನಂದ (ಮಂಡ್ಯ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಪ್ರಮುಖ ರಾಜ್ಯ ಹೆದ್ದಾರಿಗಳನ್ನು (State Highways) ಅಭಿವೃದ್ಧಿಪಡಿಸಲು ಸರ್ಕಾರವು ಕಾರ್ಯಕ್ರಮವನ್ನು ರೂಪಿಸಿದೆಯೆ;

ಆ) ಹಾಗಿದ್ದಲ್ಲಿ ಇದರ ಬಗೆಗಿನ ವಿವರಗಳೇನು;

ಇ) ಈ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ;

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಹೌದು